# ಕರ್ನಾಟಕ ಲೋಕಾಯುಕ್ತ

ಸಂಖ್ಯೆ: ಕಂಪ್ಲೆಂಟ್\ಉಪಲೋಕ್\ಬಿಡಿ-153\2014\ಸನಿಕಾಸ-2 ಬಹುಮಹಡಿಗಳ ಕಟ್ಟಡ,
ಡಾ॥ಬಿ.ಆರ್.ಅಂಭೇಡ್ಕರ್ ವೀಧಿ,
ಬೆಂಗಳೂರು, ದಿನಾಂಕ:28.10.2016

## ಕರ್ನಾಟಕ ಲೋಕಾಯುಕ್ತ ಕಾಯಿದೆ 1984ರ ಕಲಂ 12(3)ರ ಅನ್ವಯ ವರದಿ

ವಿಷಯ: ಸರ್ಕಾರಿ ನೌಕರರಾದ ಶ್ರೀ.ವೆಂಕಟರಾಜು, ತಹಶೀಲ್ದಾರ್, ದೇವನಹಳ್ಳಿ ತಾಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ ರವರು ಕರ್ತವ್ಯ ಲೋಪ/ದುರ್ವರ್ತನೆ ಎಸಗಿರುವ ಬಗ್ಗೆ.

*******

ಶ್ರೀಮತಿ ಮಂಜುಳಾ ವಿ. ತಾಯಿ ರತ್ನಮ್ಮ ಮರಲುಬಾಗಿಲು, ಹರಿಜನ ಕಾಲೋನಿ, 12ನೇ ವಾರ್ಡ, ದೇವನಹಳ್ಳಿ ಪಟ್ಟಣ, ದೇವನಹಳ್ಳಿ ತಾಲೂಕ್, ಬೆಂಗಳೂರು ಗ್ರಾಮಾಂತರ ಜಿಲ್ಲೆ, (ಇನ್ನು ಮುಂದೆ "ದೂರುದಾರರು" ಎಂದು ಕರೆಯಲ್ಪಡುತ್ತಾರೆ) ತಮ್ಮ ದೂರಿನಲ್ಲಿ ಶ್ರೀ.ವೆಂಕಟರಾಜು, ತಹಶೀಲ್ದಾರ್, ದೇವನಹಳ್ಳಿ ತಾಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ (ಇನ್ನು ಮುಂದೆ ಎದುರುದಾರ ಎಂದು ಕರೆಯಲ್ಪಡುತ್ತಾರೆ) ರವರ ವಿರುದ್ಧ ನೀಡಿದ ದೂರನ್ನು, ಕರ್ನಾಟಕ ಲೋಕಾಯುಕ್ತ ಕಾಯಿದೆಯ ಕಲಂ 9ರ ಅಡಿಯಲ್ಲಿ ತನಿಖೆಗೆ ತೆಗೆದುಕೊಂಡಿದ್ದಿದೆ.

2. **<u>ದೂರಿನ ಸಂಕ್ಷಿಪ್ತ ವಿವರಣೆ:</u>**

ದೂರುದಾರರು ತಮ್ಮ ದೂರಿನಲ್ಲಿ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೇವನಹಳ್ಳಿ ಗ್ರಾಮದ ಸ. ನಂ: 193 ಕ್ಷೇತ್ರ 1ಎ., ಜಮೀನು ಸರ್ಕಾರದಿಂದ ದೂರುದಾರರಾದ ಶ್ರೀಮತಿ ರತ್ನಮ್ಮ ಗಂಡ ವೆಂಕಟೇಶ ಇವರಿಗೆ ಮಂಜೂರಾಗಿದ್ದು ಇರುತ್ತದೆ. ಆದರೆ ಈ ಜಮೀನು ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಕ್ರಿಡಾಂಗಣಕ್ಕೆ ಸ್ವಾಧೀನಪಡಿಸಿಕೊಂಡು ದೂರುದಾರರಿಗೆ ಬದಲಿ ಜಮೀನು ನೀಡುವುದಾಗಿ ಸರ್ಕಾರದವರು ಹೇಳಿ ನಂತರ ಯಾವುದೇ ಜಮೀನು

ಲಭ್ಯವಿರುವುದಿಲ್ಲ ಅಂತ ಎದುರುದಾರರು ತಮಗೆ ಬದಲಿ ನಿವೇಶನ ನೀಡಿರುವುದಿಲ್ಲವೆಂದು ದೂರು ನೀಡಿದ್ದಾರೆ.

3. ಎದುರುದಾರರು ತಮ್ಮ ಆಕ್ಷೇಪಣೆಯಲ್ಲಿ ದೂರುದಾರರಿಗೆ ಬಗರ್ ಹುಕುಂ ಸಮೀತಿಯಲ್ಲಿ ಜಮೀನು ಮಂಜೂರಾಗಿರುವುದಿಲ್ಲ. ಆದರೆ, ಇವರು ನಮೂನೆ-53 ರಲ್ಲಿ ಅರ್ಜಿ ಸಲ್ಲಿಸಿ ಅನುಭವದಲ್ಲಿ ಇರುವುದಾಗಿ ತಿಳಿಸಿರುತ್ತಾರೆ. ಆದರೆ, ಈ ಜಮೀನನ್ನು ಮಾನ್ಯ ಜಿಲ್ಲಾಧಿಕಾರಿಗಳು ಕ್ರಿಡಾಂಗಣಕ್ಕೆ ಮಂಜೂರು ಮಾಡಿರುತ್ತಾರೆ. ಸರ್ಕಾರದ ಸೂತ್ತೋಲೆ ದಿ:9-6-2014 ಮತ್ತು ದಿ:18-9-2014 ರಂತೆ ಅರ್ಹತೆ ಇರುವುದಿಲ್ಲವಾದ್ದರಿಂದ ದೂರುದಾರರಿಗೆ ಬಂದ ಜಮೀನನ್ನು ನೀಡುವ ಪ್ರಶ್ನೆ ಉದ್ಭವಿಸುವುದಿಲ್ಲ. ಸರ್ಕಾರದ ಸೂತ್ತೋಲೆಯ ಪ್ರಕಾರ ದೇವನಹಳ್ಳಿ ಪಟ್ಟಣದಿಂದ ಜಮೀನು ಒಂದುವರೆ ಕೀಲೋಮೀಟರ್ ಅಂತರದಲ್ಲಿದ್ದು, ಇದನ್ನು ಮಂಜೂರು ಮಾಡಲು ಅವಕಾಶವಿರುದಿಲ್ಲ. ಆದ್ದರಿಂದ ಪ್ರಕರಣವನ್ನು ಮುಕ್ತಾಯಗೊಳಿಸಬೇಕೆಂದು ಕೇಳಿಕೊಂಡಿದ್ದಾರೆ.

4. ದೂರುದಾರರು ತಮ್ಮ ಪ್ರತ್ಯುತ್ತರ ಸಲ್ಲಿಸಿರುವುದಿಲ್ಲ.

5. ದೂರುದಾರರು ಹಾಜರುಪಡಿಸಿದ ದೂರು ಮತ್ತು ದಾಖಲಾತಿಗಳು, ಆಕ್ಷೇಪಣೆ ಮತ್ತು ದಾಖಲಾತಿಗಳನ್ನು ಪರಿಶೀಲಿಸಿದಾಗ, ಸರ್ಕಾರದ ಉಪ-ಕಾರ್ಯದರ್ಶಿಗಳು-3 ಬೆಂಗಳೂರು ಅಭಿವೃದ್ಧಿ ಪ್ರಾದಿಕಾರ, ಬೆಂಗಳೂರು ರವರು ಈ ಕಚೇರಿಗೆ ವರದಿಯನ್ನು ಸಲ್ಲಿಸಿದ್ದು, ಅದರಲ್ಲಿ ವಿಜಯಪುರ ಹೋಬಳಿ, ರಾಜಸ್ವ ನಿರೀಕ್ಷಕರು, ಬದಲಿ ಜಾಗೆ ನೀಡುವ ಬಗ್ಗೆ ಜಮೀನಿನ ಲಭ್ಯತೆಯ ಬಗ್ಗೆ ತಕ್ಷಣ ಪರಿಶೀಲಿಸಿ, ವರದಿ ನೀಡಲು ಆದೇಶಿಸಲಾಗಿದೆ. ದಿ:3-3-2014 ರ ವರೆಗೆ ರಾಜಸ್ವ ನಿರೀಕ್ಷಕರಿಂದ ಮಾಹಿತಿ ಬಂದಿರುವುದಿಲ್ಲ.

6. ದಿನಾಂಕ: 15-2-2014 ರಂದು ಆಗಿನ ದೇವನಹಳ್ಳಿ ತಹಶೀಲ್ದಾರರು ದೂರುದಾರರ ಸರ್ವೆ ನಂ.193 ರಲ್ಲಿ ಒಂದು ಎಕರೆ ಜಮೀನನ್ನು ಕ್ರಿಡಾಂಗಣಕ್ಕೆ ಪಡೆದುಕೊಳ್ಳಲಾಗಿತ್ತು. ಆದರೆ ಅದರ ಬಗ್ಗೆ ಬದಲಿ ಜಮೀನನ್ನು ಅವರಿಗೆ ನೀಡಬೇಕಾಗಿತ್ತು ಎಂದು ತಿಳಿಸಿದ್ದಾರೆ. ಆ ವೇಳೆಯಲ್ಲಿ ಬದಲಿ ಜಮೀನಿನ ಲಭ್ಯತೆಯ ಬಗ್ಗೆ ಗ್ರಾಮಲೆಕ್ಕಾಧಿಕಾರಿಗಳು, ರಾಜಸ್ವ ನಿರೀಕ್ಷಕರು,

ಮೋಜನಿದಾರರು, ಈ ಬಗ್ಗೆ ಸ್ಥಳ ಪರಿಶೀಲಿಸಿ, ಯಾವುದೇ ಬದಲಿ ಜಮೀನು ಇರುವುದಿಲ್ಲವೆಂದು ಎದರುದಾರರಿಗೆ ವರದಿಯನ್ನು ನೀಡಿರುತ್ತಾರೆ. ಆದ್ದರಿಂದ ದೂರುದಾರರಿಗೆ ಸರ್ವೆ ನಂ.193 ರಲ್ಲಿ ಒಂದು ಎಕರೆ ಜಮೀನು ಮಂಜೂರು ಆಗಿದ್ದು, ಅದನ್ನು ಕ್ರಿಡಾಂಗಣಕ್ಕೆ ಪಡೆದುಕೊಳ್ಳಲಾಗಿದೆ ಎನ್ನುವುದನ್ನು ಆಗೀನ ತಹಶೀಲ್ದಾರರು ಹಾಗೂ ಲಭ್ಯವಿದ್ದ ದಾಖಲೆಯಿಂದ ಕಂಡುಬರುತ್ತದೆ. ಆದರೆ, ಇಲ್ಲಿಯವರೆಗೆ ದೂರುದಾರರಿಗೆ ಬದಲಿ ನಿವೇಶನ ಅಥವಾ ಅದಕ್ಕೆ ಸಮನಾಗಿ ಪರಿಹಾರ ಧನ ನೀಡಿರುವುದಿಲ್ಲ. ಈ ಎಲ್ಲ ಅಂಶಗಳನ್ನು ಪರಿಶೀಲಿಸಿದಾಗ ಎದರುದಾರರು ದೂರುದಾರರಿಗೆ ಬದಲಿ ನಿವೇಶನ ಅಥವಾ ದೂರುದಾರರ ಜಮೀನಿಗೆ ಪರಿಹಾರ ಧನ ಒದಗಿಸಿಕೊಡುವಲ್ಲಿ ವಿಫಲರಾಗಿದ್ದಾರೆಂದು ಮೇಲ್ನೋಟಕ್ಕೆ ಕಂಡುಬರುತ್ತದೆ.

7. ಎದುರುದಾರರು ಸಾರ್ವಜನಿಕ/ ಸರ್ಕಾರಿ ನೌಕರರಾಗಿದ್ದು, ತಮ್ಮ ಕರ್ತವ್ಯ ಪರಿಪಾಲನೆಯಲ್ಲಿ ನಿಷ್ಠೆಯನ್ನು ತೋರದೆ ಕರ್ತವ್ಯ ಲೋಪವೆಸಗಿ, ಸಾರ್ವಜನಿಕ/ ಸರ್ಕಾರಿ ನೌಕರರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡಿರುವುದು ಮೇಲ್ನೋಟಕ್ಕೆ ಕಂಡುಬರುತ್ತಿರುವುದರಿಂದ, ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು 1966 ನಿಯಮ 3(1) (i) ಮತ್ತು (ii) ರನ್ವಯ ದುರ್ನಡತೆಯೆಸಗಿದ್ದು, ಶಿಸ್ತು ಕ್ರಮಕ್ಕೆ ಭಾದ್ಯರಾಗಿರುವುದು ಕಂಡು ಬಂದಿರುವುದರಿಂದ, ಕರ್ನಾಟಕ ಲೋಕಾಯುಕ್ತ ಕಾಯ್ದೆಯ ಕಲಂ 12(3) ರಡಿಯಲ್ಲಿ ಪ್ರದತ್ತವಾದ ಅಧಿಕಾರದಡಿಯಲ್ಲಿ, ಎದುರುದಾರರ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳಲು ಹಾಗೂ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿರ್ಭಂಧ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 14-ಎ ರಡಿಯಲ್ಲಿ ಈ ಸಂಸ್ಥೆಗೆ ವಹಿಸಬೇಕೆಂದು ಕೋರಿದೆ

8. ಕಡತದಲ್ಲಿಯ ಸಂಗತಿಗಳು ಹಾಗೂ ದಾಖಲಾತಿಗಳಿಂದ, ಎದುರುದಾರರು ಸರ್ಕಾರಿ ನೌಕರರಾಗಿ ಪರಿಪೂರ್ಣ ಪ್ರಾಮಾಣಿಕತೆ, ಸಂಪೂರ್ಣ ಕರ್ತವ್ಯ ನಿಷ್ಠೆ ಮತ್ತು ಸರ್ಕಾರಿ

ಸೇವಕರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡ ದುರ್ವರ್ತನೆ/ ದುರ್ನಡತೆ ಮೇಲ್ನೋಟಕ್ಕೆ ಕಂಡು ಬರುತ್ತದೆ.

9. ಹಾಗೆಯೇ, ಕರ್ನಾಟಕ ಲೋಕಾಯುಕ್ತ ಕಾಯಿದೆ 1984 ಕಲಂ 12(4)ರ ಪ್ರಕಾರ ಸಕ್ಷಮ ಪ್ರಾಧಿಕಾರವು, ಈ ವರದಿಯ ಮೇಲೆ ಏನು ಕ್ರಮ ಕೈಗೊಂಡಿದೆ ಅಥವಾ ಏನು ಕ್ರಮ ಕೈಗೊಳ್ಳಲಾಗುತ್ತದೆ ಎಂಬುದರ ಬಗ್ಗೆ ಈ ವರದಿಯನ್ನು ಸ್ವೀಕರಿಸಿದ **ಮೂರು ತಿಂಗಳೊಳಗೆ** ಈ ಪ್ರಾಧಿಕಾರಕ್ಕೆ ತಿಳಿಸಲು ಹೇಳಿದೆ.

Sd/- 28/10/16.

**[ ನ್ಯಾಯಮೂರ್ತಿ ಸುಭಾಷ್ ಬಿ ಆಡಿ]**
**ಉಪಲೋಕಾಯುಕ್ತರು,**
**ಕರ್ನಾಟಕ ರಾಜ್ಯ.**